# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 693 |
| **ಸದಸ್ಯರ ಹೆಸರು** | ಶ್ರೀ ಭೀಮರಾವ್ ಬಸವರಾಜ ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | 21.08.2026 |
| **ಉತ್ತರಿಸುವ ಸಚಿವರು** | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಹುಮನಾಬಾದ್ ಹಾಗೂ ಚಿಟಗುಪ್ಪ ತಾಲ್ಲೂಕಿನ ವ್ಯಾಪ್ತಿಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | • ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು/ ಕಲ್ಲು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ), ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿದೆ.<br><br>• ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014 ದಿನಾಂಕ: 21-01-2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46 ರಂತೆ ಸದರಿ ಸಮಿತಿಯ ಸದಸ್ಯರುಗಳಿಗೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ, ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಿದೆ.<br><br>• ಅದರಂತೆ, ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿ ಸದಸ್ಯ ಇಲಾಖೆ ಅಧಿಕಾರಿಗಳು ಅಕ್ರಮ ಗಣಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರಕರಣಗಳನ್ನು ಪತ್ತೆ ಹಚ್ಚಿ, ಅಕ್ರಮ ಎಸಗಿದವರ ವಿರುದ್ಧ ಎಂ.ಎಂ. (ಡಿ & ಆರ್) ಕಾಯ್ದೆ - 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಮೊಕದ್ದಮೆ/ ಖಾಸಗಿ ದೂರುಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದೆ. 2025-26ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಹುಮನಾಬಾದ್ ಹಾಗೂ ಚಿಟಗುಪ್ಪ ತಾಲ್ಲೂಕಿನ ವ್ಯಾಪ್ತಿಯಲ್ಲಿ ಅಕ್ರಮ ಗಣಿಗಾರಿಕೆ ಸಂಬಂಧ 46 ಪ್ರಕರಣಗಳನ್ನು ಪತ್ತೆ ಹಚ್ಚಿ, 05 ಖಾಸಗಿ ದೂರುಗಳನ್ನು ದಾಖಲಿಸಿದ್ದು, ರೂ.4.44 ಲಕ್ಷ ದಂಡ ಸಂಗ್ರಹಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು) | |
| ಇ) | ಕಳೆದ ಒಂದು ವರ್ಷದಲ್ಲಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಮಾಡುತ್ತಿರುವವರ ಮೇಲೆ ಕೈಗೊಂಡ ಕ್ರಮವೇನು? | |

ಸಂಖ್ಯೆ:ಸಿಐ-ಎಂಎಂಎಂ/344/2026

(ಸಹಿ)

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.